ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ೧೦ಳಿ ಹೆಕ್ಟೇರುಗಳು

ಇ) ಹೌದು

ಈ) ದುರಸ್ತಿ ಕೆಲಸವನ್ನು ಕೈಗೆತ್ತಿಕೊಂಡಿದ್ದು ಮಾರ್ಚ್ ೧೯೮೮ರ ಒಳಗೆ ಮುಗಿಸಲಾಗುವುದು.

ಅವಧಿಗೆ ಮುನ್ನ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಸಲು ನಿರ್ಧಾರ

೧೧೦ ಶ್ರೀ ಬಿ. ಎಸ್. ಯಡಿಯೂರಪ್ಪ (ಶಿಕಾರಿಪುರ).—ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಅವಧಿಗೆ ಮುನ್ನ ಈ ವರ್ಷ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಸುವ ನಿರ್ಧಾರದ ಹಿನ್ನೆಲೆ ಏನು ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಮಂತ್ರಿಗಳು).—

ಅ) ಮಾರ್ಚ್ — ಏಪ್ರಿಲ್ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಫೇಲಾದ ವಿದ್ಯಾರ್ಥಿಗಳಿಗೆ ವರ್ಷದಿನ ವ್ಯಾಸಂಗ ಮುಂದುವರಿಸಲು ಒಂದು ವರ್ಷ ಕಾಲಹರಣವಾಗುವುದನ್ನು ತಪ್ಪಿಸುವುದು.

ಪ್ರೌಢಶಾಲೆಗಳನ್ನು ಪ್ರಾರಂಭಿಸಿರುವ ಸರಕಾರದ ಅನಿಸಿಕೆಯ ಬಗ್ಗೆ

೧೬೩. ಶ್ರೀ ಮಲ್ಲಿಕಾರ್ಜುನಗೌಡ ಎಸ್. ಪಾಟೀಲ್ (ಸಂಕೇಶ್ವರ).— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ

ಅ) ರಾಜ್ಯದಲ್ಲಿ ಸತತವಾಗಿ ಹತ್ತು ವರ್ಷ ಮೇಲ್ಪಟ್ಟ ೭ನೇ ತರಗತಿ ಹೊಂದಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ?

ಆ) ಹತ್ತು ವರ್ಷ ಮೇಲ್ಪಟ್ಟಿರುವ ೭ನೇ ತರಗತಿಯ ಶಾಲೆಗಳನ್ನು ಕಾಂಪೋಸಿಟ್ ಜೂನಿಯರ್ ಕಾಲೇಜುಗಳನ್ನಾಗಿ ಪರಿವರ್ತಿಸಲು ಸರ್ಕಾರಕ್ಕೆ ಇರುವ ತೊಂದರೆಯೇನು ?

ಇ) ಹಳ್ಳಿಗಾಡು ಪ್ರದೇಶದಲ್ಲಿ ಪ್ರೌಢಶಾಲೆಯನ್ನು ಪ್ರಾರಂಭಿಸುವಾಗ ವಿಳಂಬವಾಗುತ್ತಿರುವ ಕಾರಣ ಹತ್ತು ವರ್ಷದ ೭ನೇ ತರಗತಿಯನ್ನು ಗಣನೆಗೆ ತೆಗೆದುಕೊಂಡು ಬರುವ ವರ್ಷದಿಂದ ಕಾಂಪೋಸಿಟ್ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು).—

ಅ) ೧೦.೨೬೫

ಆ) ೭ನೇ ತರಗತಿ ಇರುವ ಪ್ರಾಥಮಿಕ ಶಾಲೆಗಳನ್ನು ಮೊದಲು ಪ್ರೌಢ ಶಾಲೆಗಳಾಗಿ ಪರಿವರ್ತಿಸಿ ನಂತರ ಕಾಂಪೋಸಿಟ್ ಜೂನಿಯರ್ ಕಾಲೇಜುಗಳಾಗಿ ಪರಿವರ್ತಿಸಬೇಕಾಗುತ್ತದೆ. ಆರ್ಥಿಕ ಸಂಪನ್ಮೂಲಗಳನ್ನು ಅಳವಡಿಸಿ, ಸಾಕಷ್ಟು ಕಟ್ಟಡ ಸ್ಥಳಾವಕಾಶ ಇಲ್ಲದೆ ತೊಂದರೆ ಇರುವುದರಿಂದ ಇಂತಹ ಎಲ್ಲಾ ಶಾಲೆಗಳನ್ನು ಪರಿವರ್ತಿಸಲು ಸಾಧ್ಯವಾಗುವುದಿಲ್ಲ.

ಇ) ರಾಜ್ಯವು ೧೦+೨+೩ ಶಿಕ್ಷಣ ನೀತಿಯನ್ನು ಅನುಸರಿಸುತ್ತಿರುವ ಕಾರಣ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳನ್ನು ಸಂಯುಕ್ತಗೊಳಿಸಿ ಕಾಂಪೋಸಿಟ್ ಪ್ರೌಢ ಶಾಲೆಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿಲ್ಲ.